For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ದಿನಾಂಕ : 03.07.2026

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಧಿಸೂಚಿಸಲಾದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ & ಸಹಾಯಕ ಕೃಷಿ ಅಧಿಕಾರಿ ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ಮೂಲ ವೃಂದದ ಗ್ರೂಪ್ –ಬಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹಾಗೂ ಕಡ್ಡಾಯ ಕನ್ನಡ ಪರೀಕ್ಷೆಯನ್ನು ನಡೆಸುವ ಸಂಬಂಧ ಪರೀಕ್ಷಾ ವೇಳಾಪಟ್ಟಿ

ಸಂಖ್ಯೆ: ಇಡಿ/ಕೆಇಎ/08/ನೇ.ವಿ/2026 (ಆರ್.ಪಿ.ಸಿ) ದಿನಾಂಕ: 30.05.2026
ಸಂಖ್ಯೆ: ಇಡಿ/ಕೆಇಎ/09/ನೇ.ವಿ/2026 (ಕೆ.ಕೆ) ದಿನಾಂಕ: 30.05.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ 30.05.2026 ರಂದು ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಲಾಗಿತ್ತು. ಸದರಿ ಅಧಿಸೂಚನೆಯಲ್ಲಿ ದಿನಾಂಕ 25.07.2026 ರಂದು ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಹಾಗೂ ದಿನಾಂಕ 26.07.2026 ರಂದು ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ಪತ್ರಿಕೆ–1 ರ ಮತ್ತು ಪತ್ರಿಕೆ–2 ರ ಪರೀಕ್ಷೆಯನ್ನು ನಿಗದಿಗೊಳಿಸಲಾಗಿತ್ತು ಹಾಗೂ ಕಡ್ಡಾಯ ಕನ್ನಡ ಪರೀಕ್ಷೆಯ ವೇಳಾಪಟ್ಟಿಯನ್ನು ನಂತರದಲ್ಲಿ ತಿಳಿಸಲಾಗುವುದೆಂದು ಪ್ರಕಟಿಸಲಾಗಿತ್ತು.

ಈ ಮಧ್ಯೆ ಕೆಲವು ಅಭ್ಯರ್ಥಿಗಳು ಪ್ರಾಧಿಕಾರಕ್ಕೆ ಮನವಿಯನ್ನು ಸಲ್ಲಿಸಿ ದಿನಾಂಕ 26.07.2026 ರಂದು ಆರ್.ಬಿ.ಐ ಸಂಸ್ಥೆಯಿಂದ ಪರೀಕ್ಷೆಯನ್ನು ನಡೆಸಲಾಗುತ್ತಿರುವುದರಿಂದ, ಪ್ರಾಧಿಕಾರದಿಂದ ಅಧಿಸೂಚಿಸಲಾದ ಕೃಷಿ ಇಲಾಖೆಯ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿ ಸಂಬಂಧ ಪರೀಕ್ಷೆ ದಿನಾಂಕವನ್ನು ಮುಂದೂಡುವಂತೆ ಕೋರಿರುವುದರಿಂದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿಯು ಹಾಗೂ ಕಡ್ಡಾಯ ಕನ್ನಡ ಪರೀಕ್ಷೆಯ ವೇಳಾಪಟ್ಟಿಯು ಈ ಕೆಳಗಿನಂತಿದೆ.

ದಿನಾಂಕ & ದಿನ	ಹುದ್ದೆ ಪದನಾಮ	ಪರೀಕ್ಷೆ	ಸಮಯ	ಗರಿಷ್ಟ ಅಂಕಗಳು
19.07.2026 (ಭಾನುವಾರ)	ಕಡ್ಡಾಯ ಕನ್ನಡ ಪರೀಕ್ಷೆ		ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ವರೆಗೆ	150
25.07.2026 (ಶನಿವಾರ)	ಕೃಷಿ ಅಧಿಕಾರಿ & ಸಹಾಯಕ ಕೃಷಿ ಅಧಿಕಾರಿ (ಕಲ್ಯಾಣ ಕರ್ನಾಟಕ)	ಸಾಮಾನ್ಯ ಜ್ಞಾನ – ಪತ್ರಿಕೆ–1	ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ವರೆಗೆ	300
	ಕೃಷಿ ಅಧಿಕಾರಿ & ಸಹಾಯಕ ಕೃಷಿ ಅಧಿಕಾರಿ (ಕಲ್ಯಾಣ ಕರ್ನಾಟಕ)	ನಿರ್ದಿಷ್ಟ ಪತ್ರಿಕೆ – ಪತ್ರಿಕೆ–2	ಮಧ್ಯಾಹ್ನ 02.30 ರಿಂದ ಸಂಜೆ 04.30 ವರೆಗೆ	300
09.08.2026 (ಭಾನುವಾರ)	ಕೃಷಿ ಅಧಿಕಾರಿ & ಸಹಾಯಕ ಕೃಷಿ ಅಧಿಕಾರಿ (ಉಳಿಕೆ ಮೂಲ ವೃಂದ)	ಸಾಮಾನ್ಯ ಜ್ಞಾನ – ಪತ್ರಿಕೆ–1	ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ವರೆಗೆ	300
	ಕೃಷಿ ಅಧಿಕಾರಿ & ಸಹಾಯಕ ಕೃಷಿ ಅಧಿಕಾರಿ (ಉಳಿಕೆ ಮೂಲ ವೃಂದ)	ನಿರ್ದಿಷ್ಟ ಪತ್ರಿಕೆ – ಪತ್ರಿಕೆ–2	ಮಧ್ಯಾಹ್ನ 02.30 ರಿಂದ ಸಂಜೆ 04.30 ವರೆಗೆ	300

- *ಪರೀಕ್ಷಾ ಕೇಂದ್ರದಲ್ಲಿ Frisking ಮತ್ತು ಮುಖಚಹರೆ ಪರಿಶೀಲಿಸಿ ಪ್ರವೇಶ ನೀಡುವುದರಿಂದ ಎರಡು ಘಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದೊಳಗೆ ಹಾಜರಿರತಕ್ಕದ್ದು.*
- *ಋಣಾತ್ಮಕ ಮೌಲ್ಯಮಾಪನವಿದ್ದು, ಪ್ರತಿ ತಪ್ಪು ಉತ್ತರಕ್ಕೆ 1/4 ರಷ್ಟು (0.75) ಅಂಕಗಳನ್ನು ಕಡಿತಗೊಳಿಸಲಾಗುವುದು.*
- *ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತವನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರಶ್ನೆಗೆ 1/4 ರಷ್ಟು (0.75) ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.*
- *ಕಡ್ಡಾಯ ಕನ್ನಡ ಪರೀಕ್ಷೆಯಲ್ಲಿ ಋಣಾತ್ಮಕ ಮೌಲ್ಯಮಾಪನ ಇರುವುದಿಲ್ಲ.*

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in